ಶ್ರೀನಿವಾಸ ಡಿಸ್ಟಿಲರಿ ಮಧ್ಯಸಾರ ಘಟಕಕ್ಕೆ ವಿದ್ಯುತ್ ಬಳಸಲು ಅನುಮತಿ ನೀಡಲಾಗಿದೆಯೇ?

ಆ. ಇಲ್ಲದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ವೀರಕುಮಾರ್ ಅ.ಪಾಟೀಲ್: (ಇಂಧನ ರಾಜ್ಯ ಸಚಿವರು):

ಅ ಮತ್ತು ಆ) ಇಲ್ಲ. ಈ ಘಟಕಕ್ಕೆ ಫೆಬ್ರವರಿ-2001ರಲ್ಲಿ ತಾತ್ಕಾಲಿಕ ವಿದ್ಯುತ್ ಸರಬರಾಜನ್ನು ಕಲ್ಪಿಸಲಾಗಿದೆ.

ನಾಗಮಂಗಲ ಕ್ಷೇತ್ರದಲ್ಲಿ ವಿದ್ಯುತ್ ಸರಬರಾಜಿನ ಹೆಚ್ಚಳ.

3009(3815)

ಶ್ರೀ ಚಲುವರಾಯ ಸ್ವಾಮಿ ಎನ್.(ನಾಗಮಂಗಲ): ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ನಾಗಮಂಗಲ ಮತಕ್ಷೇತ್ರದಲ್ಲಿ ಕುಡಿಯುವ ನೀರು ಹಾಗೂ ಪಂಪ್ ಸೆಟ್ಟುಗಳಿಗೆ ವಿದ್ಯುತ್ ಬಳಕೆಯನ್ನು ಹೆಚ್ಚಿಸಲು ಸರಿಯಾದ ರೀತಿಯಲ್ಲಿ ಕೆ.ಪಿ.ಟಿ.ಸಿ.ಎಲ್.ಗೆ ಸಾಮಗ್ರಿಗಳನ್ನು ಒದಗಿಸುತ್ತಿಲ್ಲದಿರುವುದು ಸರಕಾರದ ಗಮನಕ್ಕೆ ಬಂದಿದೆಯೇ?

ಆ. ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರದ ಕ್ರಮವೇನು?

ಶ್ರೀ ವೀರಕುಮಾರ್ ಅ. ಪಾಟೀಲ್ (ಇಂಧನ ರಾಜ್ಯ ಸಚಿವರು):

ಅ. ನಾಗಮಂಗಲ ಮತ ಕ್ಷೇತ್ರದಲ್ಲಿ ಕುಡಿಯುವ ನೀರು ಹಾಗೂ ಪಂಪುಸೆಟ್ಟುಗಳ ವಿದ್ಯುದೀಕರಣಕ್ಕೆ ಬೇಕಾಗುವ ಸಾಮಗ್ರಿಗಳನ್ನು ಒದಗಿಸಲಾಗುತ್ತಿದೆ.

ಆ) ಉದ್ಭವಿಸುವುದಿಲ್ಲ.

ಚಿಂತಾಮಣಿ ನಗರದಲ್ಲಿನ ಚೇಳೂರು ರಸ್ತೆ ಪಕ್ಕದಲ್ಲಿ ಓವರ್‌ಹೆಡ್ ಟ್ಯಾಂಕ್ ಕಟ್ಟುವುದು.

3010(3471)